ಅಂಜುಮಾನ್-ಎ-ಇಸ್ಲಾಂ ಸಂಸ್ಥೆಗೆ ನೀಡಿದ ಧನ ಸಹಾಯ

2551 - ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ - ಗ್ರಾಮೀಣ) : ಮಾನ್ಯ ಬೆಂಗಳೂರು ಪ್ರಾಧಿಕಾರ ಅಭಿವೃದ್ಧಿ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿಯ ಅಂಜುಮಾನ್-ಎ-ಇಸ್ಲಾಂ ಸಂಸ್ಥೆಗೆ ಕಳೆದ 5 (ಐದು) ವರ್ಷಗಳಲ್ಲಿ ಸರ್ಕಾರ ನೀಡಿದ ಧನ ಸಹಾಯ ಎಷ್ಟು (ವರ್ಷವಾರು ವಿವರ ನೀಡುವುದು)

ಆ) ಯಾವ ಉದ್ದೇಶದ ಸಲುವಾಗಿ ಧನ ಸಹಾಯ ನೀಡಲಾಗಿದೆ?

ಶ್ರೀ ರೋಷನ್ ಬೇಗ್ ಆರ್. (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ ವಕ್ಫ್ ರಾಜ್ಯ ಸಚಿವರು) :

ಅ) ಹುಬ್ಬಳ್ಳಿಯ ಅಂಜುಮನ್-ಎ-ಇಸ್ಲಾಂ ಸಂಸ್ಥೆಗೆ ಕಳೆದ 5 ವರ್ಷಗಳಲ್ಲಿ ಸರ್ಕಾರದಿಂದ ಯಾವುದೇ ಧನ ಸಹಾಯ ನೀಡಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಭದ್ರಾ ಮೇಲ್ದಂಡೆ ಯೋಜನೆಯ ಪ್ರಗತಿ

2515 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಿಗೆ ವರದಾನವಾಗಿರುವ ಭದ್ರಾ ಮೇಲ್ದಂಡೆ ಯೋಜನೆಯನ್ನು ಕಾರ್ಯಗತ ಮಾಡುವಲ್ಲಿ ಕುಂಠಿತ ಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ತುಮಕೂರು ಜಿಲ್ಲೆಯನ್ನು ಇತ್ತೀಚಿನ ಮಳೆಯ ಅಭಾವದಿಂದ ಬರಗಾಲ ಪ್ರದೇಶವೆಂದು ಗುರುತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ತುಮಕೂರು ಜಿಲ್ಲೆಗೆ ಶಾಶ್ವತ ಪರಿಹಾರ ನೀಡುವ ಹಿನ್ನಲೆಯಲ್ಲಿ ಈ ಭದ್ರಾ ಮೇಲ್ದಂಡೆ ಯೋಜನೆಯನ್ನು ಕೂಡಲೇ ಕಾರ್ಯಗತ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿಲ್ಲದಿದ್ದಲ್ಲಿ, ಈ ಯೋಜನೆಯನ್ನು ಕಾರ್ಯಗತ ಕೈಗೊಳ್ಳುವುದು ಯಾವಾಗ?

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಭದ್ರಾ ಮೇಲ್ದಂಡೆ ಯೋಜನೆಯು ತನಿಖಾ ಹಂತದಲ್ಲಿದೆ.

ಆ) ಬರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ತಾಂತ್ರಿಕ ಶಕ್ಯತೆಯನ್ನನುಸರಿಸಿ ಕಾರ್ಯಗತ ಮಾಡುವ ಬಗ್ಗೆ ನಿರ್ಣಯ ತೆಗೆದುಕೊಳ್ಳಲಾಗುವುದು.

1994 ರಲ್ಲಿ ನೇಮಕಗೊಂಡ ಸಬ್ ಇನ್ಸ್‌ಪೆಕ್ಟರ್‌ಗಳ ತರಬೇತಿ

2513 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1994ರ ಮೇ ನಲ್ಲಿ 162 ಸಬ್-ಇನ್ಸ್‌ಪೆಕ್ಟರ್‌ಗಳನ್ನು ನೇಮಿಸಿಕೊಂಡ ಅವರನ್ನು ತರಬೇತಿಗೆ ಕಳುಹಿಸಿದ್ದು ನಿಜವೇ;

ಆ) ಈ ತರಬೇತಿ ಮುಗಿಯುತ್ತಾ ಬಂದಿರುವ ಸಂದರ್ಭದಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಈ ನೇಮಕಾತಿಯನ್ನು ರದ್ದು ಮಾಡಿರುವುದೇ ನಿಜವೇ;